ಕರ್ನಾಟಕ ವಿಧಾನ ಪರಿಷತ್ತು

152ನೇ ಅಧಿವೇಶನ-2024

| ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುವ ವಿಷಯ | |
|---|---|
| ಪ್ರಸ್ತಾಪಿಸಿರುವ ಸದಸ್ಯರ ಹೆಸರು | ಶ್ರೀ ಮರಿತಿಬ್ಬೇಗೌಡ<br>ವಿಧಾನ ಪರಿಷತ್ತಿನ ಸದಸ್ಯರು |

ವಿಷಯ:

ಡಿಪ್ಲೋಮಾ ಕೋರ್ಸ್ ಮತ್ತು ಉತ್ತರ ಪತ್ರಿಕೆಗಳ ಮೌಲ್ಯಮಾಪನ ದರ ಹಾಗೂ ಇತರೆ ಭತ್ಯೆಗಳನ್ನು ಪದವಿ ಪೂರ್ವ ಪರೀಕ್ಷಾ ಮಂಡಳಿಯವರು ನೀಡುತ್ತಿರುವಂತೆ ಸಮಾನಾಂತರವಾಗಿ ನೀಡುವಂತೆ ಕೋರಿ.

ಪ್ರಸ್ತಾಪಿತ ವಿಷಯಕ್ಕೆ ಸಂಬಂಧಿಸಿದಂತೆ ಮಾನ್ಯ ಉನ್ನತ ಶಿಕ್ಷಣ ಸಚಿವರ ಹೇಳಿಕೆ

ಡಿಪ್ಲೊಮಾ ಪರೀಕ್ಷೆಗಳಿಗಾಗಿ ಕಾರ್ಯ ನಿರ್ವಹಿಸುವ ಅಧಿಕಾರಿಗಳು/ಬೋಧಕರು/ ಬೋಧಕೇತರ/ಕಾರ್ಯಗಾರ/ಕಛೇರಿ ಸಿಬ್ಬಂದಿ ವರ್ಗದವರಿಗೆ ನೀಡಲಾಗುತ್ತಿರುವ ಪರೀಕ್ಷಾ ಸಂಭಾವನೆ ಹಾಗೂ ದಿನಭತ್ಯೆಗಳನ್ನು ಪರಿಷ್ಕರಿಸುವ ಸಲುವಾಗಿ ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಗೆ ಸಲ್ಲಿಸಲಾಗಿತ್ತು.

ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 606 ವೆಚ್ಚ – 8/2022, ದಿನಾಂಕ:02.09.2022ರಲ್ಲಿ "ಸಾರ್ವಜನಿಕ ಲೆಕ್ಕಪತ್ರ ಸಮಿತಿಗಳು ಈ ಹಿಂದೆ ನೀಡಿರುವ ಸಲಹೆಯಂತೆ, ವಿಶ್ವವಿದ್ಯಾನಿಲಯಗಳ ಬೋಧಕ ಸಿಬ್ಬಂದಿಗಳಿಗೆ ಪರೀಕ್ಷಾ ಸಂಬಂಧಿತ ಕಾರ್ಯಗಳಿಗೆ ಯಾವುದೇ ಭತ್ಯೆಯನ್ನು ನೀಡಲು ಅವಕಾಶವಿರುವುದಿಲ್ಲ. ಅದರಂತೆ, AICTE ವೇತನ ಶ್ರೇಣಿಯನ್ನು ಪಡೆಯುತ್ತಿರುವ ಪಾಲಿಟೆಕ್ನಿಕ್ ಮತ್ತು ಇಂಜಿನಿಯರಿಂಗ್ ಕಾಲೇಜುಗಳ ಬೋಧಕ ಸಿಬ್ಬಂದಿಗಳಿಗೂ ಪರೀಕ್ಷಾ ಸಂಬಂಧಿತ ಕಾರ್ಯಗಳಿಗೆ ಯಾವುದೇ ಭತ್ಯೆಯನ್ನು ನೀಡುವ ಅವಕಾಶವಿರುವುದಿಲ್ಲ. ಆದ್ದರಿಂದ, ಬೋಧಕ ಸಿಬ್ಬಂದಿಗಳನ್ನು ಹೊರತುಪಡಿಸಿ, ಬೋಧಕೇತರ ಸಿಬ್ಬಂದಿಗಳಿಗೆ ಮಾತ್ರ ಅನ್ವಯಿಸಿ ಪರಿಷ್ಕೃತ ಭತ್ಯೆಗಳಿಂದ ಉಂಟಾಗುವ ಆರ್ಥಿಕ ಹೊರೆಯ ಮಾಹಿತಿಯೊಂದಿಗೆ ಪರಿಷ್ಕೃತ ಪ್ರಸ್ತಾವನೆಯನ್ನು ಮರುಸಲ್ಲಿಸುವಂತೆ ಆರ್ಥಿಕ ಇಲಾಖೆಯು ತಿಳಿಸಿರುತ್ತದೆ.

ಅದರಂತೆ, ಪರಿಷ್ಕೃತ ಭತ್ಯೆಗಳಿಂದ ಉಂಟಾಗುವ ಅಂದಾಜು ಆರ್ಥಿಕ ಹೊರೆಯ ಮಾಹಿತಿಯನ್ನು ಆರ್ಥಿಕ ಇಲಾಖೆಗೆ ಸಲ್ಲಿಸುವ ಸಲುವಾಗಿ ಇಲಾಖೆಯ ಹಂತದಲ್ಲಿ ದಿನಾಂಕ:20.01.2024ರಂದು ಸಮಿತಿಯನ್ನು ರಚಿಸಲಾಗಿದ್ದು, ಮರು ಪ್ರಸ್ತಾವನೆಯನ್ನು ಸಲ್ಲಿಸುವ ಪ್ರಕ್ರಿಯೆ ಅಂತಿಮ ಹಂತದಲ್ಲಿರುತ್ತದೆ.

ಸಂಖ್ಯೆ:ಇಡಿ 19 ಟಿಪಿಇ 2024

(ಡಾ. ಎಂ.ಸಿ. ಸುಧಾಕರ್)
ಉನ್ನತ ಶಿಕ್ಷಣ ಸಚಿವರು